ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆ
ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ : ಸಹನಿಶಾಶಿ.ಆಶಾ/ಕ.ವೈ.ಕು:ಜಾ:ಸು/32544./ಇ.ವಿ:2020 ದಿನಾಂಕ : 13.03.2020

-: ಸುತ್ತೋಲೆ :-

ವಿಷಯ : Novel Coronavirus (COVID-19) ನ ವೈರಸ್ ಸೋಂಕು ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಅಗತ್ಯ ಪೂರ್ವಸಿದ್ಧತಾ ಕ್ರಮಗಳ ಕುರಿತು.

ಉಲ್ಲೇಖ : 1) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಕರ್ನಾಟಕ ಸರ್ಕಾರ ಇವರ ಸಲಹೆ ಪತ್ರ ಸಂಖ್ಯೆ : DD/SSU/Novel Coronavirus/17/2019-20, ದಿನಾಂಕ : 18.02.2020.
2) ಜಂಟಿ ಕಾರ್ಯದರ್ಶಿಗಳು, ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ, ನವದೆಹಲಿ, ಇವರ ಪತ್ರ ಸಂಖ್ಯೆ : 14-6/2020-IS-10, ದಿನಾಂಕ : 21.02.2020.
3) ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 27.02.2020.
4) ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 09.03.2020.
5) ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 12.03.2020.

- - -

Novel Coronavirus (COVID-19) ಈ ರೋಗಾಣು ಶಾಲಾ ವಿದ್ಯಾರ್ಥಿಗಳಲ್ಲಿ ಪಸರಿಸುವುದನ್ನು ತಡೆಗಟ್ಟುವ ಸಲುವಾಗಿ ತೆಗೆದು ಕೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮಗಳ ಬಗ್ಗೆ ಈಗಾಗಲೇ ಉಲ್ಲೇಖ (3)ರ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿದೆ. 2019-20ನೇ ಸಾಲಿನ 1 ರಿಂದ 10ನೇ ತರಗತಿಯ ವಾರ್ಷಿಕ ಪರೀಕ್ಷೆಗಳನ್ನು ಉಲ್ಲೇಖ (4) ಸುತ್ತೋಲೆಯಲ್ಲಿ ನಿಗದಿಪಡಿಸಿದ ದಿನಾಂಕಗಳಂದು ನಡೆಸುವಂತೆ ಈಗಾಗಲೇ ಸೂಚನೆ ನೀಡಲಾಗಿತ್ತು. ನಂತರ ಉಲ್ಲೇಖ (5) ರ ಸುತ್ತೋಲೆಯಲ್ಲಿ ಬೆಂಗಳೂರು (ಉತ್ತರ), (ದಕ್ಷಿಣ) ಹಾಗೂ ಗ್ರಾಮಾಂತರ ಜಿಲ್ಲೆಗಳ ವ್ಯಾಪ್ತಿಯ ಶಾಲಾ ತರಗತಿಗಳನ್ನು ಸ್ಥಗಿತಗೊಳಿಸುವ ಬಗ್ಗೆ ಹಾಗೂ ವಾರ್ಷಿಕ ಪರೀಕ್ಷೆಗಳನ್ನು ನಡೆಸುವ ಬಗ್ಗೆ ಸೂಚನೆಗಳನ್ನು ನೀಡಲಾಗಿತ್ತು.

ಮುಂದುವರೆದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಹಾಗೂ ಮುನ್ನೆಚ್ಚರಿಕಾ ಕ್ರಮವಾಗಿ ರಾಜ್ಯದ ಇತರೆ ಜಿಲ್ಲೆಗಳ ಎಲ್ಲಾ ಶಾಲೆಗಳೂ ಸಹ ಈ ಕಳಕಂಡಂತೆ ಕ್ರಮ ವಹಿಸುವುದು :

| | |
|---|---|
| 1 ರಿಂದ 6ನೇ ತರಗತಿಯ ವಿದ್ಯಾರ್ಥಿಗಳಿಗೆ | 1 ರಿಂದ 6ನೇ ತರಗತಿಯ ಎಲ್ಲಾ ಶಾಲೆಗಳಿಗೆ ದಿನಾಂಕ : 14.03.2020 ರಿಂದ ಜಾರಿಗೆ ಬರುವಂತೆ ತರಗತಿಗಳನ್ನು ಸ್ಥಗಿತಗೊಳಿಸುವುದು ಹಾಗೂ ಒಂದು ವೇಳೆ ಪರೀಕ್ಷೆಗಳು ಚಾಲ್ತಿಯಲ್ಲಿದ್ದಲ್ಲಿ ಪರೀಕ್ಷೆಗಳನ್ನು ಸಹ ಸ್ಥಗಿತಗೊಳಿಸಿ ಬೇಸಿಗೆ ರಜೆಯನ್ನು ಘೋಷಿಸುವುದು.<br><br>ವಿದ್ಯಾರ್ಥಿಗಳು 2019-20ನೇ ಶೈಕ್ಷಣಿಕ ಸಾಲಿನಲ್ಲಿ ತಾವು FA1, FA2, FA3, FA4, SA1 & SA2 (ದಿನಾಂಕ : 13.03.2020 ರವರೆಗೆ ನಡೆದ ಪರೀಕ್ಷೆಗಳ ಅಂಕಗಳ ಆಧಾರ) ರಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ವಿದ್ಯಾರ್ಥಿಗಳ ಶ್ರೇಣಿಕೃತ ಫಲಿತಾಂಶವನ್ನು ಪ್ರಕಟಿಸಿ ಮುಂದಿನ ತರಗತಿಗಳಿಗೆ ಬಡ್ತಿ (promote) ನೀಡುವುದು.<br><br>ಬೇಸಿಗೆ ರಜೆಯ ನಂತರ 2020-21ನೇ ಶೈಕ್ಷಣಿಕ ಸಾಲಿನ ವೇಳಾಪಟ್ಟಿಯಂತೆ ಶಾಲೆಗಳನ್ನು ಪುನರಾರಂಭ ಮಾಡುವುದು. |
| 7 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ | ದಿನಾಂಕ : 14.03.2020 ರಿಂದ ಜಾರಿಗೆ ಬರುವಂತೆ ತರಗತಿಗಳನ್ನು ಪರೀಕ್ಷಾ ಪೂರ್ವಸಿದ್ಧತಾ ರಜೆಯ (Study Leave) ಮಾದರಿಯಲ್ಲಿ ಸ್ಥಗಿತಗೊಳಿಸಿ ಪರೀಕ್ಷಾ ದಿನಗಳಂದು ಮಾತ್ರ ಹಾಜರಾಗಲು ಸೂಚಿಸುವುದು. 7 ರಿಂದ 9ನೇ ತರಗತಿಯ ವಿದ್ಯಾರ್ಥಿಗಳಿಗೆ ದಿನಾಂಕ : 23.03.2020ರೊಳಗೆ ಪರೀಕ್ಷೆಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಿ, ಬೇಸಿಗೆ ರಜೆಯನ್ನು ಘೋಷಿಸುವುದು.<br><br>10ನೇ ತರಗತಿಯ ವಿದ್ಯಾರ್ಥಿಗಳಿಗೆ ಈಗಾಗಲೇ ನಿಗಧಿಯಾಗಿರುವ ವೇಳಾಪಟ್ಟಿಯಂತೆ ಪರೀಕ್ಷೆಯನ್ನು ನಡೆಸುವುದು.<br><br>ಬೇಸಿಗೆ ರಜೆಯ ನಂತರ 2020-21ನೇ ಶೈಕ್ಷಣಿಕ ಸಾಲಿನ ವೇಳಾಪಟ್ಟಿಯಂತೆ ಶಾಲೆಗಳನ್ನು ಪುನರಾರಂಭ ಮಾಡುವುದು. |

ವಿದ್ಯಾರ್ಥಿಗಳು ಸುರಕ್ಷತಾ ಕ್ರಮವಾಗಿ ಮಾಸ್ಕ್ (mask) ಧರಿಸಿ ಪರೀಕ್ಷೆಯನ್ನು ಬರೆಯಲು ಇಚ್ಛಿಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಅನುಮತಿಯನ್ನು ನೀಡುವುದು. ಪರೀಕ್ಷೆಗಳ ಸಂದರ್ಭದಲ್ಲಿ ಮಕ್ಕಳ ಸುರಕ್ಷತೆಗೆ ಅಗತ್ಯವಿರುವ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಶಾಲಾ ಮುಖ್ಯಸ್ಥರುಗಳಿಗೆ ತಿಳಿಸಿದೆ.

ಮೇಲಿನ ಆದೇಶ, ಅದರಲ್ಲಿನ ಎಲ್ಲಾ ಸೂಚನೆಗಳನ್ನು ಒಳಗೊಂಡಂತೆ, ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಪಠ್ಯಕ್ರಮ/ಸಿ.ಬಿ.ಎಸ್.ಸಿ/ಐ.ಸಿ.ಎಸ್.ಸಿ/ಐ.ಜಿ.ಸಿ.ಎಸ್.ಸಿ/ಐ.ಬಿ ಮುಂತಾದ ಪಠ್ಯಕ್ರಮದ ಎಲ್ಲಾ ಶಾಲೆಗಳಿಗೂ ಅನ್ವಯವಾಗುತ್ತದೆ.

13/3/20.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ :

1) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)
3) ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯೋಪಾಧ್ಯಾಯರುಗಳಿಗೆ ಕಳುಹಿಸುತ್ತಾ ಅತೀ ತುರ್ತು ಕ್ರಮ ಮತ್ತು ಅನುಷ್ಠಾನಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

<u>ಪ್ರತಿಯನ್ನು ಗೌರವಗಳೊಂದಿಗೆ ಮಾಹಿತಿಗಾಗಿ</u>

1) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.
3) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.